**JUNE 19, 2025**

**ALL INDIA RADIO- DHARWAD**

**PRADESH SAMACHARA (KANNADA) 7:05 AM**

- ಹಂತ, ಹಂತವಾಗಿ ವಿದ್ಯುತ್ ಇಲಾಖೆಯಲ್ಲಿನ ಖಾಲಿ ಹುದ್ದೆಗಳ ಭರ್ತಿ– ಮುಖ್ಯಮಂತ್ರಿ ಸಿದ್ದರಾಮಯ್ಯ.

- ಸರ್ಕಾರಿ ಆಸ್ಪತ್ರೆಗಳಲ್ಲಿನ ಸಿಬ್ಬಂದಿ ಕೊರತೆ ನೀಗಿಸಲು ಅಗತ್ಯ ಕ್ರಮ–ಆರೋಗ್ಯ ಸಚಿವ ದಿನೇಶ್ ಗುಂಡೂರಾವ್.

- ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದಲ್ಲಿ ದೇಶದ ಪ್ರಥಮ ವಿದ್ಯುತ್ ಚಾಲಿತ ಸಫಾರಿ ಬಸ್‌ಗೆ ಅರಣ್ಯ ಖಾತೆ ಸಚಿವರಿಂದ ಚಾಲನೆ.

- ನಂದಿಗಿರಿಧಾಮದಲ್ಲಿ ನಡೆಸಲುದ್ದೇಶಿಸಿದ್ದ ಸಚಿವ ಸಂಪುಟ ಸಭೆ ಸ್ಥಳಾಂತರ–ಶಾಶ್ವತ ನೀರಾವರಿ ಸಮಿತಿ ಬೇಸರ.

ಈಗ ವಾರ್ತೆಗಳ ವಿವರ

*******

ವಿದ್ಯುತ್ ಇಲಾಖೆಯಲ್ಲಿ ಖಾಲಿ ಇರುವ 35,000 ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ನೌಕರರ ಸಂಘದ ವಜ್ರ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಇಲಾಖೆ ನೌಕರರ ಬೇಡಿಕೆಗಳ ಕುರಿತು ಸರ್ಕಾರಕ್ಕೆ ಕಾಳಜಿ ಇದೆ. ಒಪಿಎಸ್ ಜಾರಿಯನ್ನು ಪ್ರಣಾಳಿಕೆಯಲ್ಲೇ ಘೋಷಿಸಿದ್ದು, ಈ ಬಗ್ಗೆ ಚರ್ಚಿಸಿ ಅಗತ್ಯ ಕ್ರಮ ತೆಗೆದುಕೊಳ್ಳಲಾಗುವುದು ಎಂದರು. ಪ್ರಸ್ತುತ ರಾಜ್ಯದಲ್ಲಿ 34,000 ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತಿದ್ದು, ರೈತರ ಕೃಷಿ ಪಂಪ್ ಸೆಟ್‌ಗಳಿಗೆ ಹಗಲಲ್ಲೂ 7 ಗಂಟೆ ಅಗತ್ಯ ವಿದ್ಯುತ್ ಸರಬರಾಜು ಮಾಡಲು ಶಕ್ತರಾಗಿದ್ದೇವೆ ಎಂದು ಮುಖ್ಯಮಂತ್ರಿ ಹೇಳಿದರು.

*******

ಸರ್ಕಾರಿ ಆಸ್ಪತ್ರೆಗಳಲ್ಲಿನ ಸಿಬ್ಬಂದಿ ಕೊರತೆ ನೀಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯ ಸುಳ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿ ಕೊರತೆ ಇರುವುದು ಗಮನದಲ್ಲಿದೆ. ಹಂತ ಹಂತವಾಗಿ ಹುದ್ದೆ ಭರ್ತಿಗೆ ಕ್ರಮ ವಹಿಸಲಾಗುವುದು ಎಂದರು. ಎಲ್ಲಾ ತಾಲೂಕು ಆಸ್ಪತ್ರೆಗಳಿಗೆ ಬ್ಲಡ್ ಬ್ಯಾಂಕ್ ನೀಡಲು ಅವಕಾಶವಿಲ್ಲ. ಕೇವಲ ಜಿಲ್ಲಾಸ್ಪತ್ರೆಗಳಿಗೆ ಮಾತ್ರ ನೀಡಲು

ಅವಕಾಶವಿದೆ. ಗರ್ಭಿಣಿಯರ ಆಪರೇಷನ್ ಸಂಧರ್ಭದಲ್ಲಿ ಬ್ಲೀಡಿಂಗ್ ಸಂಭವಿಸುತ್ತಿರುವ ಹಿನ್ನೆಲೆಯಲ್ಲಿ, ಇದೀಗ ರಾಜ್ಯದ ಎಲ್ಲಾ ತಾಲೂಕು ಆಸ್ಪತ್ರೆಗಳಲ್ಲಿ ಪ್ಲಾಸ್ಮಾ ಸ್ಟೋರೇಜ್ ಕೇಂದ್ರ ತೆರೆಯಲಾಗುತ್ತಿದ್ದು, ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿದೆ ಎಂದು ಎಂದು ಸಚಿವರು ಹೇಳಿದರು.

*******

ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದಲ್ಲಿ ದೇಶದ ಪ್ರಥಮ ವಿದ್ಯುತ್ ಚಾಲಿತ ಸಫಾರಿ ಬಸ್‌ಗೆ ಅರಣ್ಯ ಖಾತೆ ಸಚಿವ ಈಶ್ವರ್ ಖಂಡ್ರೆ ವರ್ಚುವಲ್ ಮೂಲಕ ಚಾಲನೆ ನೀಡಿದರು. ಉದ್ಯಾನವನದಲ್ಲಿ ದೇಶದ ಪ್ರಥಮ ವಿದ್ಯುತ್ ಚಾಲಿತ ಸಫಾರಿ ಬಸ್ ಪ್ರಾಯೋಗಿಕವಾಗಿ ಸಂಚರಿಸಲಿದ್ದು, ಡೀಸೆಲ್ ವಾಹನಗಳಿಂದ ಹೊರಹೊಮ್ಮುವ ಇಂಗಾಲದ ಪ್ರಮಾಣ ತಗ್ಗಿಸುವ ಉದ್ದೇಶದಿಂದ ವಿದ್ಯುತ್ ಚಾಲಿತ ವಾಹನ ಪರಿಚಯಿಸಲಾಗಿದೆ ಎಂದು ತಿಳಿಸಿದರು. ಬನ್ನೇರುಘಟ್ಟ ಜೈವಿಕ ಉದ್ಯಾನವನಕ್ಕೆ ಕೆಲವೇ ತಿಂಗಳುಗಳಲ್ಲಿ ಚಿಂಪಾಜಿ, ಚಿತಾ, ಜಾಗ್ವರ್ ಸೇರಿದಂತೆ ಹತ್ತು ವಿದೇಶಿ ವನ್ಯಜೀವಿಗಳು ಸೇರ್ಪಡೆಯಾಗಲಿವೆ ಎಂದು ಸಚಿವರು ತಿಳಿಸಿದರು.

*******

ಎತ್ತಿನಹೊಳೆ ಯೋಜನೆಗೆ ಈ ವರ್ಷ 10 ಸಾವಿರ ಕೋಟಿ ರೂಪಾಯಿ ಅನುದಾನ ನೀಡಿ, ಆದ್ಯತೆಯ ಮೇಲೆ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಚಿಕ್ಕಬಳ್ಳಾಪುರ ಸಂಸದ ಡಾ.ಕೆ.ಸುಧಾಕರ್ ಆಗ್ರಹಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಸಿ ವ್ಯಾಲಿ ಮತ್ತು ಹೆಚ್ ಎನ್ ವ್ಯಾಲಿ ಯೋಜನೆಗಳ ತೃತೀಯ ಹಂತದ ನೀರು ಶುದ್ಧೀಕರಣಕ್ಕೆ ಸರ್ಕಾರ ಮುಂದಾಗಬೇಕು ಎಂದರು. ರಾಜ್ಯದಲ್ಲಿ ಮಾವು ಬೆಲೆ ಕುಸಿತವಾಗಿ ಮಾವು ಬೆಳೆಗಾರರು ಸಂಕಷ್ಟದಲ್ಲಿದ್ದು, ಕೂಡಲೇ ಸರ್ಕಾರ, ಆಂಧ್ರ ಸರ್ಕಾರದ ಮಾದರಿಯಲ್ಲಿ ಪ್ರತಿ ಕೆಜಿ ಮಾವಿಗೆ 4 ರೂಪಾಯಿ ಬೆಂಬಲ ಬೆಲೆ ನೀಡಿ ರೈತರಿಗೆ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

*******

ಆಹಾರ ಸಂಸ್ಕರಣೆ ಮತ್ತು ಪ್ಯಾಕೇಜಿಂಗ್‌ನಲ್ಲಿ ಜಾಗತಿಕ ಮಟ್ಟದಲ್ಲಿ ಖ್ಯಾತಿ ಪಡೆದಿರುವ ಟೆಟ್ರಾ ಪ್ಯಾಕ್ ಸಂಸ್ಥೆಯ ಹಿರಿಯ ನಾಯಕತ್ವ ತಂಡವನ್ನು, ಕೈಗಾರಿಕಾ ಖಾತೆ ಸಚಿವ ಎಂ.ಬಿ.ಪಾಟೀಲ್ ತಮ್ಮ ಸ್ವೀಡನ್ ಪ್ರವಾಸದ ವೇಳೆ ಭೇಟಿಯಾಗಿ, ಭವಿಷ್ಯದ ಯೋಜನೆಗಳ ಕುರಿತು ಸಮಾಲೋಚನೆ ನಡೆಸಿದರು. ಸಂಸ್ಥೆ ಕರ್ನಾಟಕದಲ್ಲಿ ತನ್ನ ಹೂಡಿಕೆ ಹಾಗೂ ಕಾರ್ಯವಿಸ್ತಾರವನ್ನು ಮುಂದುವರಿಸಲು ಆಹ್ವಾನಿಸಲಾಗಿದೆ. ಈ ಭೇಟಿ ಫಲಶ್ರುತಿಯತ್ತ ಕರೆದೊಯ್ಯುವ ಆಶಯವಿದೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ.

*******

ಇಂದು ಮಧ್ಯಾಹ್ನ 12 ಗಂಟೆಗೆ ಚಿಕ್ಕಬಳ್ಳಾಪುರ ಜಿಲ್ಲೆಯ ಇತಿಹಾಸ ಪ್ರಸಿದ್ಧ ನಂದಿಗಿರಿಧಾಮದಲ್ಲಿ ನಡೆಸಲು ಉದ್ದೇಶಿಸಲಾಗಿದ್ದ ಸಚಿವ ಸಂಪುಟ ಸಭೆಯನ್ನು ಬೆಂಗಳೂರಿನ ವಿಧಾನಸೌಧದ ಸಚಿವ ಸಂಪುಟ ಸಭಾ ಮಂದಿರಕ್ಕೆ ಸ್ಥಳಾಂತರಿಸಿ ಸಚಿವ

ಸಂಪುಟದ ಸರ್ಕಾರದ ಅಪರ ಕಾರ್ಯದರ್ಶಿ ಆರ್.ಚಂದ್ರಶೇಖರ್ ಆದೇಶ ಹೊರಡಿಸಿದ್ದಾರೆ. ನಂದಿಗಿರಿಧಾಮದಲ್ಲಿ ಸಚಿವ ಸಂಪುಟ ಸಭೆ ನಡೆದು ಈ ಭಾಗದ ಅಭಿವೃದ್ಧಿ ದೃಷ್ಟಿಯಿಂದ ಜನತೆ ಹಲವು ನಿರೀಕ್ಷೆಗಳನ್ನು ಹೊಂದಿದ್ದರು. ಆದರೆ, ಸಂಪುಟ ಸಭೆಯನ್ನು ಬೆಂಗಳೂರಿಗೆ ಸ್ಥಳಾಂತರ ಮಾಡುವ ಮೂಲಕ ಜನರ ನಿರೀಕ್ಷೆಗಳನ್ನು ಸರ್ಕಾರ ಹುಸಿಗೊಳಿಸಿದೆ ಎಂದು ಚಿಕ್ಕಬಳ್ಳಾಪುರ ಸಂಸದ ಡಾ.ಕೆ.ಸುಧಾಕರ್ ಆರೋಪಿಸಿದ್ದಾರೆ. ಚಿಕ್ಕಬಳ್ಳಾಪುರ ತಾಲ್ಲೂಕಿನ ನಂದಿಗಿರಿಧಾಮದಲ್ಲಿ ನಡೆಯಬೇಕಾಗಿದ್ದ ರಾಜ್ಯ ಸಚಿವ ಸಂಪುಟ ಸಭೆಯನ್ನು ಕೊನೆಯ ಕ್ಷಣದಲ್ಲಿ ಬೆಂಗಳೂರಿನ ವಿಧಾನಸೌಧಕ್ಕೆ ಸ್ಥಳಾಂತರ ಮಾಡಿರುವುದು ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ಜನರ ನಿರೀಕ್ಷೆಗಳನ್ನು ಹುಸಿಗೊಳಿಸಿದೆ ಎಂದು ಶಾಶ್ವತ ನೀರಾವರಿ ಹೋರಾಟ ಸಮಿತಿ ಬೇಸರ ವ್ಯಕ್ತಪಡಿಸಿದೆ.

*******

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆಯನ್ನು ಆದ ಷ್ಟ ಬೇಗ ನಡೆಸಲಾಗುವುದು ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕುರಿತು ಪ್ರತಿಪಕ್ಷ ನಾಯಕರೊಂದಿಗೆ ಈಗಾಗಲೇ ಚರ್ಚಿಸಲಾಗಿದೆ, ಕೆಲ ಸಲಹೆ ಸೂಚನೆಗಳನ್ನು ನೀಡಿದ್ದು, ಚುನಾವಣೆಗೆ ಸೂಕ್ತ ಸಮಯ ನಿರ್ಧರಿಸಲಾಗುವುದು ಎಂದು ಶಿವಕುಮಾರ್ ಹೇಳಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಈ ತಿಂಗಳ **21** ರಂದು ನಡೆಯಲಿರುವ **11** ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ರಾಜ್ಯದ ವಿವಿಧೆಡೆ ಹಲವು ವಿಧಾಯಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಸಂದರ್ಭದಲ್ಲಿ ಪತಂಜಲಿ ಯೋಗ ಪೀಠ, ವಿಜಯನಗರ ಜಿಲ್ಲಾ ಆಯು ್ಷ ಇಲಾಖೆಯ ಜತೆಗೂಡಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ನಗರದ ಫ್ರೀಡಂ ಪಾರ್ಕ್‌ನಲ್ಲಿ ಯೋಗದಿನ ಕಾರ್ಯಕ್ರಮ ನಡೆಯಲಿದೆ.

ಪತಂಜಲಿ ಯೋಗ ಪೀಠದಲ್ಲಿ ಕಳೆದ **17** ವ ರ್ಷಗಳಿಂದ ಯೋಗಭ್ಯಾಸದ ಜೊತೆಗೆ ಸುಮಾರು **300** ಕ್ಕೂ ಅಧಿಕ ಶಿಬಿರಗಳನ್ನು ಆಯೋಜಿಸಿ, ಹತ್ತು ಸಾವಿರ ಶಿಬಿರಾರ್ಥಿಗಳಿಗೆ ಯೋಗಭ್ಯಾಸ ಹೇಳಿಕೊಟ್ಟಿರುವ ಯೋಗಗುರು ಮತ್ತು ಪತಂಜಲಿ ಪೀಠದ ರಾಜ್ಯ ಯುವ ಪ್ರಭಾರಿ, ಕಿರಣ್ ಕುಮಾರ್, ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಧ್ವನಿ–ಕಿರಣಕುಮಾರ–**30** ಸೆಕೆಂಡ್ಸ್

*******

ಕೃಷಿ ಹೊಂಡಗಳಲ್ಲಿ ಮಕ್ಕಳು ಬಿದ್ದು ಸಾವನ್ನಪ್ಪಿರುತ್ತಿರುವ ಘಟನೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಬೆಳಗಾವಿ ಜಿಲ್ಲಾ ಪಂಚಾಯತ ಸಿಇಒ ರಾಹುಲ್ ಶಿಂಧೆ ಸೂಚನೆ ನೀಡಿದ್ದಾರೆ. ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ನಡೆದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ನೀರಾವರಿ ಸೌಲಭ್ಯಕ್ಕಾಗಿ ನಿರ್ಮಿಸಿಕೊಂಡಿರುವ ಕೃಷಿ ಹೊಂಡಗಳಲ್ಲಿ ಮಕ್ಕಳು ಬಿದ್ದು ಸಾವನ್ನಪ್ಪುತ್ತಿರುವ ಘಟನೆಗಳು ವರದಿಯಾಗುತ್ತಿವೆ. ಇಂಥ ಘಟನೆಗಳನ್ನು ತಡೆಯಲು ತಂತಿ ಬೇಲಿ ನಿರ್ಮಾಣ, ಕೃಷಿ ಹೊಂಡಗಳ ಮುಂದೆ ಅಪಾಯ ಮುನ್ಸೂಚನೆ ಕುರಿತು ನಾಮಫಲಕ ಅಳವಡಿಸುವುದು. ಜತೆಗೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸ್ವಚ್ಛ ವಾಹಿನಿಯ ಮೂಲಕ ಗ್ರಾಮೀಣ ಭಾಗದಲ್ಲಿ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

*******

ವಿಪತ್ತುಗಳು ಸಂಭವಿಸಿದಾಗ ಜನರಲ್ಲಿ ಆತ್ಮವಿಶ್ವಾಸ ಮೂಡಿಸುವ ಕೆಲಸವನ್ನು ಜಿಲ್ಲಾ ವಿಪತ್ತು ನಿರ್ವಹಣಾ ಪಡೆ ಮಾಡಬೇಕು ಎಂದು ಕೋಲಾರ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಹೇಳಿದ್ದಾರೆ. ಕೋಲಾರದಲ್ಲಿ ನಿನ್ನೆ ಕ್ಷಿಪ್ರ ಕಾರ್ಯಾಚರಣೆ ತಂಡ **K-RAT** ಉದ್ಘಾಟಿಸಿ ಮಾತನಾಡಿದ ಅವರು, ಸಾರ್ವಜನಿಕರ ಪ್ರಾಣ, ಆಸ್ತಿ ರಕ್ಷಣೆ ಮಾಡುವಂತಹ ಕಾರ್ಯ ಜಿಲ್ಲಾ ವಿಪತ್ತು ನಿರ್ವಹಣಾ ಪಡೆಯ ಮುಖ್ಯ ಉದ್ದೇಶ. ಮಳೆ, ವಿಪತ್ತುಗಳು ಸಂಭವಿಸಿದಾಗ ಜಿಲ್ಲಾ ವಿಪತ್ತು ನಿರ್ವಹಣಾ ಪಡೆ ಸನ್ನದ್ಧರಾಗಿ ಕಾರ್ಯ ನಿರ್ವಹಿಸಬೇಕು. ಇದರಲ್ಲಿ ಸಾರ್ವಜನಿಕ ಸಹಭಾಗಿತ್ವ ಸಹ ಮುಖ್ಯವಾಗಿದ್ದು, ಎಲ್ಲರ ಜೀವನ ರಕ್ಷಣೆ ಮಾಡುವ ಸಾಮಾಜಿಕ ಹೊಣೆಗಾರಿಕೆ ಸಮುದಾಯಗಳಿಗೂ ಬರಬೇಕು ಎಂದರು.

*******

ಸರಕಾರಿ ಯೋಜನೆಗಳನ್ನು ಜನರಿಗೆ ತಲುಪಿಸುವುದು ಇಲಾಖೆಗಳ ಆದ್ಯ ಕರ್ತವ್ಯ ಎಂದು ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಎಸ್.ಆರ್.ಪಾಟೀಲ ಹೇಳಿದ್ದಾರೆ. ಧಾರವಾಡದಲ್ಲಿ ನಿನ್ನೆ ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ವಿಶ್ವ ಸಂಸ್ಥೆಯ ಶ್ಲಾಘನೆ ಪಡೆದಿವೆ. ಪ್ರತಿ ಅರ್ಹ ಫಲಾನುಭವಿಗೆ ಪಂಚ ಗ್ಯಾರಂಟಿ ಯೋಜನೆಗಳನ್ನು ತಲುಪಿಸುವುದು ಇಲಾಖೆಗಳ ಕರ್ತವ್ಯವಾಗಿದೆ ಎಂದರು.

*******

ಕೇಂದ್ರ ಸಾಹಿತ್ಯ ಅಕಾದೆಮಿ ಕೊಡಮಾಡುವ **2025** ನೇ ಸಾಲಿನ ಯುವ ಪುರಸ್ಕಾರಕ್ಕೆ ಕನ್ನಡ ವಿಭಾಗದಲ್ಲಿ ಆರ್.ದಿಲೀಪ್ ಕುಮಾರ್ ಅವರ 'ಪಚ್ಚೆಯ ಜಗುಲಿ' ವಿಮರ್ಶಾ ಸಂಕಲನ, ಹಾಗೂ ಬಾಲ ಸಾಹಿತ್ಯ ಪುರಸ್ಕಾರ ಲೇಖಕ ಕೆ.ಶಿವಲಿಂಗಪ್ಪ ಹಂದಿಹಾಳು ಅವರ 'ನೋಟಬುಕ್' ಮಕ್ಕಳ ಕಥಾಸಂಕಲನ ಆಯ್ಕೆಯಾಗಿವೆ. ಪ್ರಶಸ್ತಿ ತಲಾ **50** ಸಾವಿರ ನಗದು ಹಾಗೂ ಫಲಕ ಒಳಗೊಂಡಿದ್ದು, ಡಾಕ್ಟರ್ ಜಿ.ಎಂ.ಹೆಗ್ಡೆ, ಪ್ರೊಫೆಸರ್ ವಿಕ್ರಂ ವಿಸಾಜಿ, ಡಾ.ಟಿ.ಪಿ.ಅಶೋಕ ತೀರ್ಪುಗಾರರಾಗಿದ್ದರು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಹಂತ, ಹಂತವಾಗಿ ವಿದ್ಯುತ್ ಇಲಾಖೆಯಲ್ಲಿನ ಖಾಲಿ ಹುದ್ದೆಗಳ ಭರ್ತಿ– ಮುಖ್ಯಮಂತ್ರಿ ಸಿದ್ದರಾಮಯ್ಯ.

ಸರ್ಕಾರಿ ಆಸ್ಪತ್ರೆಗಳಲ್ಲಿನ ಸಿಬ್ಬಂದಿ ಕೊರತೆ ನೀಗಿಸಲು ಅಗತ್ಯ ಕ್ರಮ–ಆರೋಗ್ಯ ಸಚಿವ ದಿನೇಶ್ ಗುಂಡೂರಾವ್.

ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದಲ್ಲಿ ದೇಶದ ಪ್ರಥಮ ವಿದ್ಯುತ್ ಚಾಲಿತ ಸಫಾರಿ ಬಸ್‌ಗೆ ಅರಣ್ಯ ಖಾತೆ ಸಚಿವರಿಂದ ಚಾಲನೆ.

ನಂದಿಗಿರಿಧಾಮದಲ್ಲಿ ನಡೆಸಲುದ್ದೇಶಿಸಿದ್ದ ಸಚಿವ ಸಂಪುಟ ಸಭೆ ಸ್ಥಳಾಂತರ–ಶಾಶ್ವತ ನೀರಾವರಿ ಸಮಿತಿ ಬೇಸರ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********